# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಾರ್ವಜನಿಕ ಸಂಪರ್ಕ ವಿಭಾಗ, ನರಸಿಂಹರಾಜ ವೃತ್ತ, ಬೆಂಗಳೂರು-560 002**

***ಪತ್ರಿಕಾ ಪ್ರಕಟಣೆ*** **ದಿನಾಂಕ: 15.06.2011**

ಕರ್ನಾಟಕದ ಘನ ಉಚ್ಛ ನ್ಯಾಯಾಲಯದ ಆದೇಶದಂತೆ ದೊಮ್ಮಲೂರು – ಕೋರಮಂಗಲ ರಿಂಗ್ ರಸ್ತೆಯಿಂದ ಅಮರಜ್ಯೋತಿನಗರಕ್ಕೆ ಸಂಪರ್ಕ ಕಲ್ಪಿಸುವ ರಸ್ತೆಯ ಬದಿಯಲ್ಲಿ ಅಕ್ರಮವಾಗಿ ನಿರ್ಮಿಸಲಾದ 11 ಮನೆಗಳನ್ನು ಇಂದು ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಕಾರ್ಯಾಚರಣೆ ನಡೆಸಿ ತೆರವುಗೊಳಿಸಿದೆ.

ಅಮರಜ್ಯೋತಿ ಬಡಾವಣೆ ನಿರ್ಮಿಸುವ ಸಂದರ್ಭದಲ್ಲಿ ಕೆಲವು ಕೊಳಗೇರಿ ನಿವಾಸಿಗಳು ಖಾಲಿ ಇದ್ದ ಜಾಗವನ್ನು ಆಕ್ರಮಿಸಿಕೊಂಡು, 11 ಮನೆಗಳನ್ನು ನಿರ್ಮಿಸಿ ಇಲ್ಲಿ ವಾಸಿಸುತ್ತಿದ್ದರು ಮತ್ತು ಈ ಜಾಗ ತಮ್ಮದೆಂದು ಪಾಲಿಕೆಗೆ ರಸ್ತೆ ನಿರ್ಮಿಸಲು ಅವಕಾಶ ಕೊಟ್ಟಿರಲಿಲ್ಲ. ಪಾಲಿಕೆ ಹಲವಾರು ಬಾರಿ ಇವುಗಳನ್ನು ತೆರವುಗೊಳಿಸಲು ಪ್ರಯತ್ನಿಸಿದಾದರೂ ಯಶಸ್ವಿಯಾಗಿರಲಿಲ್ಲ. ಇದನ್ನು ಪ್ರಶ್ನಿಸಿ ಅಮರಜ್ಯೋತಿನಗರ ಕ್ಷೇಮಾಭಿವೃದ್ಧಿ ಸಂಘದವರು ಹೈಕೋರ್ಟ್ ಮೊರೆ ಹೋಗಿದ್ದರು. ಸಂಘದ ಮನವಿಯನ್ನು ಪುರಸ್ಕರಿಸಿ, ಹೈಕೋರ್ಟ್ ಕೂಡಲೇ ಮನೆಗಳನ್ನು ತೆರವುಗೊಳಿಸುವಂತೆ ಬಿಬಿಎಂಪಿಗೆ ಆದೇಶಿಸಿದ್ದರೂ ಮನೆಗಳನ್ನು ತೆರವುಗೊಳಿಸಲು ವಿಳಂಬವಾಗಿದ್ದಕ್ಕೆ ಇತ್ತೀಚೆಗೆ ಹೈಕೋರ್ಟ್ ಬಿಬಿಎಂಪಿಗೆ ಅಂತಿಮ ಕಟ್ಟುನಿಟ್ಟಿನ ಆದೇಶ ನೀಡಿರುವ ಹಿನ್ನೆಲೆಯಲ್ಲಿ ಇಂದು ಪೂರ್ವ ವಲಯ ಜಂಟಿ ಆಯುಕ್ತರಾದ ಶ್ರೀ ಕೆ.ಸಿ. ಶಿವಶಂಕರ್ ರವರ ನೇತೃತ್ವದಲ್ಲಿ ಬಿಗಿಬಂದೋಬಸ್ತಿನ ನಡುವೆ 11 ಮನೆಗಳನ್ನು ತೆರವುಗೊಳಿಸಲಾಯಿತು.

ಏಕಾಏಕಿ ಮನೆಗಳನ್ನು ತೆರವುಗೊಳಿಸಿರುವುದರಿಂದ ನಿವಾಸಿಗಳು ಬೀದಿಪಾಲಾಗುತ್ತಾರೆ. ತಕ್ಷಣವೇ ಪರ್ಯಾಯ ವ್ಯವಸ್ಥೆ ಮಾಡಿಕೊಡಬೇಕೆಂದು ಮನವಿ ಮಾಡಿದರು. ಪಾಲಿಕೆ ಆಯುಕ್ತರು ತೆರವುಗೊಳಿಸುವ ಸ್ಥಳಕ್ಕೆ ಭೇಟಿ ನೀಡಿ, ನಿವಾಸಿಗಳಿಗೆ ಪರ್ಯಾಯ ವ್ಯವಸ್ಥೆ ಕಲ್ಪಿಸಿಕೊಡುವುದಾಗಿ ಪಾಲಿಕೆ ಆಯುಕ್ತರು ಭರವಸೆ ನೀಡಿದರು. ಈ ಸಂದರ್ಭದಲ್ಲಿ ಸ್ಥಳೀಯ ಶಾಸಕರಾದ ಶ್ರೀ ಎನ್.ಎ. ಹ್ಯಾರಿಸ್ ರವರು ಹಾಜರಿದ್ದರು.

**ಸಾರ್ವಜನಿಕ ಸಂಪರ್ಕಾಧಿಕಾರಿ**